ಸರ್ವೋನ್ನತ ನ್ಯಾಯಾಲಯವು ದಿನಾಂಕ 22.4.91ರಂದು ನೀಡಿದ ಆದೇಶದ ಮೇರೆಗೆ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ದಿನಗೂಲಿ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಹಾಗೂ 1-7-84 ರಂದು ಅಥವಾ ಆ ತರುವಾಯ ಆದರೆ 15-10-92 ರಂದು ಅಥವಾ ಅದಕ್ಕೆ ಮುಂಚೆ ನೇಮಕಗೊಂಡ ದಿನಗೂಲಿ ಪದವೀಧರ ಇಂಜಿನಿಯರ್‌ಗಳು ಮತ್ತು ಡಿಪ್ಲೋಮಾ ಇಂಜಿನಿಯರ್‌ಗಳನ್ನು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 13 ಸೇಸ್ಥಆ 94, ದಿನಾಂಕ 29-9-94ರ ಆದೇಶದಲ್ಲಿ ಸಕ್ರಮಗೊಳಿಸುವಂತೆ ಆದೇಶಿಸಿದೆ. ಸರ್ವೋನ್ನತ ನ್ಯಾಯಾಲಯದ ತೀರ್ಪು ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ದಿನಗೂಲಿ ಆಧಾರದ ಮೇಲೆ ನೇಮಕಗೊಂಡ ಪದವೀಧರ ಇಂಜಿನಿಯರ್ ಮತ್ತು ಡಿಪ್ಲೋಮಾ ಇಂಜಿನಿಯರ್‌ಗಳಿಗೆ ಮಾತ್ರ ಅನ್ವಯಿಸುತ್ತದೆ. ಈ ತೀರ್ಪು ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಕೆಲಸ ಮಾಡುತ್ತಿರುವ ಇತರೆ ದಿನಗೂಲಿ ನೌಕರರಿಗೆ ಅನ್ವಯಿಸುವುದಿಲ್ಲ.

3)ಈ ಆದೇಶದ ಹಿನ್ನೆಲೆಯಲ್ಲಿ ಲೋಕೋಪಯೋಗಿ ಇಲಾಖೆಯು ಆದೇಶ ಸಂಖ್ಯೆ: ಪಿಡಬ್ಲ್ಯುಡಿ 357 ಪಿಡಬ್ಲ್ಯುಸಿ 90, ದಿನಾಂಕ 2-12-94 ರ ಆದೇಶವನ್ನು ಹೊರಡಿಸಿದೆ,

(4)ಅಧಿಕೃತ ಜ್ಞಾಪನ ಸಂಖ್ಯೆ : ಡಿಪಿಎಆರ್ 10 ಎಸ್‌ಎಲ್‌ಸಿ 83, ದಿನಾಂಕ 3-7-84 ರಲ್ಲಿ ಲೋಕೋಪಯೋಗಿ ಇಲಾಖೆಯನ್ನು ಹೊರತುಪಡಿಸಿ, ಇನ್ನಿತರ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ರಾಜ್ಯ ಸರ್ಕಾರವು ದಿನಗೂಲಿ ನೌಕರರನ್ನು ನೇಮಕ ಮಾಡಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇದಿಸಿದೆ. ಈ ರೀತಿ ಸೂಚನೆಗಳನ್ನು ನೀಡಿದ್ದರೂ ಸಹ ಅನೇಕ ಸರ್ಕಾರಿ ಇಲಾಖೆಗಳಲ್ಲಿ ದಿನಗೂಲಿ ನೌಕರರನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ.

(5) ಕರ್ನಾಟಕ ಸರ್ಕಾರಿ ದಿನಗೂಲಿ ನೌಕರರ ಮಂದಲ, ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ : 8192:90ನ್ನು ಸಲ್ಲಿಸಿದ್ದು, ಕರ್ನಾಟಕ ಉಚ್ಚ ನ್ಯಾಯಾಲಯವು ದಿನಾಂಕ 11-4-90ರ ಮಧ್ಯಂತರ ಆದೇಶದಲ್ಲಿ 240 ದಿನಗಳ ಸತತ ಸೇವೆ ಸಲ್ಲಿಸಿದ ದಿನಗೂಲಿ ನೌಕರರನ್ನು ಕೆಲಸದಿಂದ ತೆಗೆದುಹಾಕದಂತೆ ರಾಜ್ಯ ಸರ್ಕಾರಕ್ಕೆ ಆದೇಶಿಸಿದೆ. ಕರ್ನಾಟಕ ಸಾಂದರ್ಭಿಕ: ದಿನಗೂಲಿ ನೌಕರರ ಸಂಘ, ಹುಬ್ಬಳ್ಳಿ, ಇವರು ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಸಲ್ಲಿಸಿರುವ ರಿಟ್ ಅರ್ಜಿ ಸಂಖ್ಯೆ : 12610:93 ಸಲ್ಲಿಸಿದ್ದು, ಕರ್ನಾಟಕ ಉಚ್ಚ ನ್ಯಾಯಾಲಯವು ದಿನಾಂಕ 23-4-93ರ ಆದೇಶದಲ್ಲಿ 1-7-84ರ ನಂತರ ನೇಮಕಗೊಂಡು ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಜಿಲ್ಲಾ ಪರಿಷತ್ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ ದಿನಗೂಲಿ ನೌಕರರನ್ನು ತೆಗೆದುಹಾಕುವುದನ್ನು ತಡೆಹಿಡಿದಿದೆ. ಈ ಎರಡೂ ರಿಟ್ ಅರ್ಜಿಗಳು ನ್ಯಾಯಾಲಯದಲ್ಲಿ ಬಾಕಿ ಇರುತ್ತವೆ. ಈ ಹಿನ್ನಲೆಯಲ್ಲಿ 1-7-84ರ ನಂತರ ನೇಮಕಗೊಂಡ ದಿನಗೂಲಿ ನೌಕರರ ಸೇವೆಯಲ್ಲಿ ಮುಂದುವರಿಯುತ್ತಿದ್ದಾರೆ. ನ್ಯಾಯಾಲಯದ ಅಂತಿಮ ತೀರ್ಪು ಹೊರಬಿದ್ದ ನಂತರ, ಸರ್ಕಾರವು ಸಾಧಕ-ಬಾಧಕಗಳನ್ನು ಪರಿಶೀಲಿಸಿ ಅಂತಿಮ ನಿರ್ಣಯ ತೆಗೆದುಕೊಳ್ಳುವುದು.

ಶ್ರೀ ಎಸ್.ಯೋಗೀಶ್ ಭಟ್ (ಮಂಗಳೂರು):- ಮಾನ್ಯ ಅಧ್ಯಕ್ಷರೆ, ಮಂಗಳೂರು ಮಹಾನಗರ ಪಾಲಿಕೆಯಲ್ಲಿರುವ ರಸ್ತೆಗಳು ಹಾಳಾಗಿದ್ದು ಹೊಂಡಗಳಿಂದ ತುಂಬಿದ್ದು, ಇದರಿಂದ ಸಾರ್ವಜನಿಕರಿಗೆ ತೀವ್ರ ತೊಂದರೆಗಳುಂಟಾಗಿದ್ದು ಅನೇಕ ವಾಹನ ಅಪಘಾತಗಳು ಉಂಟಾಗಿದ್ದು ಕಂಡು ಬಂದುದರಿಂದ ಸರಕಾರದ ಗಮನ ಸೆಳೆಯುತ್ತಾ, ತಕ್ಷಣ ವಿಶೇಷ

ಅನುದಾನ ಬಿಡುಗಡೆ ಮಾಡಿ, ಪಿ.ಡಬ್ಲ್ಯು.ಡಿ.ರಸ್ತೆಯ ಮಹಾನಗರ ಪಾಲಿಕಾರಸ್ತೆಯನ್ನು ಹಾಗು ರಾಷ್ಟ್ರೀಯ ಹೆದ್ದಾರಿಯನ್ನು ದುರಸ್ತಿಗೊಳಿಸಲು ಸೂಕ್ತ ಕ್ರಮಕೈಗೊಳ್ಳಬೇಕೆಂದು ನಗರಾಭಿವೃದ್ಧಿ ಸಚಿವರನ್ನು ಒತ್ತಾಯಿಸುತ್ತಾ ಇದ್ದೇವೆ.

ಶ್ರೀ ವೈಜನಾಥ ಪಾಟೀಲ್ (ನಗರಾಭಿವೃದ್ಧಿ ಮತ್ತು ಕಾಡಾ ಸಚಿವರು):- ಮಾನ್ಯ ಅಧ್ಯಕ್ಷರೆ, ಮಂಗಳೂರಿನಲ್ಲಿ ಧಾರಾಕಾರವಾಗಿ ಮಳೆ ಬೀಳುತ್ತಿದ್ದು, ಮಂಗಳೂರು ಮಹಾನಗರ ಪಾಲಿಕೆಯ ರಸ್ತೆಗಳು ಹಾಳಾಗಿದ್ದು ಹೊಂಡಗಳಿಂದ ತುಂಬಿದ್ದು ಸಾರ್ವಜನಿಕರಿಗೆ ತೀವ್ರ ತೊಂದರೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಈಗ ಮಹಾನಗರ ಪಾಲಿಕೆಯ ರಸ್ತೆ ಹೊಂಡಗಳನ್ನು ತಾತ್ಕಾಲಿಕವಾಗಿ ತುಂಬಿಸಿ ದುರಸ್ತಿ ಕಾರ್ಯವನ್ನು ಕೈಗೊಳ್ಳಲಾಗಿದೆ. ಇದರಿಂದ ಸಾರ್ವಜನಿಕರ ತೊಂದರೆಗಳನ್ನು ಬಗೆಹರಿಸಲು ನಗರಪಾಲಿಕೆಯು ರೂ.1.00 ಕೋಟಿ ಹಣವನ್ನು ಬಿಡುಗಡೆ ಮಾಡುವಂತೆ ಕೋರುವ ಪ್ರಸ್ತಾವನೆಯು ಸರ್ಕಾರಕ್ಕೆ ಬಂದಿಲ್ಲ. ಈ ಬಗ್ಗೆ ಪ್ರಸ್ತಾವನೆಯು ಬಂದಲ್ಲಿ ಸರ್ಕಾರದ ಆರ್ಥಿಕ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಹಣ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು ಹಾಗೂ ಮಳೆ ನಿಂತ ಕೂಡಲೇ ಶಾಶ್ವತ ದುರಸ್ತಿ ಕೆಲಸ ಕೈಗೊಳ್ಳಲಾಗುವುದು.

ಶ್ರೀ ಯು.ಬಿ.ಬಣಕಾರ್ (ಹಿರೇಕೆರೂರ್):- ಸನ್ಮಾನ್ಯ ಅಧ್ಯಕ್ಷರೆ, ಧಾರವಾಡ ಜಿಲ್ಲಾ ಹಿರೇಕೆರೂರು ತಾಲ್ಲೂಕು ಹಳ್ಳೂರ, ಪುರದಕೇರಿ, ಗುಡ್ಡದ ಮಾದಾಪುರ, ಅಣಜಿ ಕಮಲಾಪುರ, ಚಿಕ್ಕಕಬ್ಬಾರ ಗ್ರಾಮದ ನಾಗರೀಕರು ವಿದ್ಯುತ್ತಿನ ಅಸಮರ್ಪಕ ವಿತರಣೆ, ಲೋ ವೋಲ್ಟೇಜು ಬಗ್ಗೆ ಪ್ರತಿಭಟನೆ ಮಾಡುತ್ತಿದ್ದು. ಈಗ ಸುಮಾರು 7-8 ದಿವಸಗಳ ಹಿಂದೆ ಹಿರೇಕೆರೂರ ಕೆ.ಇ.ಬಿ.ಕಚೇರಿಯ ಹತ್ತಿರ ಗಲಾಟೆ ಆಗಿ ಕೆಲವರ ಮೇಲೆ ಕೇಸು ಹಾಕಲಾಗಿರುತ್ತದೆ. ಇದು ಅನೇಕ ವರ್ಷಗಳಿಂದ ನಡೆಯುತ್ತಾ ಬಂದಿದೆ. ಹಳ್ಳೂರಿನಲ್ಲಿ 66/11 ಕೆ.ವಿ.ಸಬ್ ಸ್ಟೇಷನ್ ಪ್ರಾರಂಭಿಸಲು ಮುಖ್ಯ ಇಂಜಿನಿಯರರು ಹುಬ್ಬಳ್ಳಿ ವಲಯದವರು ಮುಖ್ಯ ಇಂಜಿನಿಯರ್ ಎಲೆಕ್ಟ್ರಿಸಿಟಿ ಇವರಿಗೆ ಪ್ರಸ್ತಾವನೆ ಕಳುಹಿಸಿರುತ್ತದೆ. ಕಾರಣ ಬೇಗನೆ ಹಳ್ಳೂರಿನಲ್ಲಿ 66/11 ಕೆ.ವಿ. ಸಬ್‌ಸ್ಟೇಷನ್ ಕಾರ್ಯ ಪ್ರಾರಂಭಿಸುವ ಮುನ್ನ ಉಪಮುಖ್ಯಮಂತ್ರಿಗಳಲ್ಲಿ ವಿನಂತಿಸುತ್ತೇನೆ.

ಶ್ರೀ ಜೆ.ಹೆಚ್.ಪಟೇಲ್ (ಉಪ ಮುಖ್ಯ ಮಂತ್ರಿಗಳು):- ಮಾನ್ಯ ಅಧ್ಯಕ್ಷರೆ, ಹಿರೇಕೆರೂರು ತಾಲ್ಲೂಕಿನ ಹಂಸಭಾವಿಯಲ್ಲಿ ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯ ಒಂದು 33:11 ಕೆ.ವಿ. ವಿದ್ಯುತ್ ಸಬ್ ಸ್ಟೇಷನ್‌ನನ್ನು ಸುಮಾರು 80 ಲಕ್ಷ ರೂ. ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿದೆ. ನಿರ್ಮಾಣ ಕಾರ್ಯಗಳನ್ನು ಡಿಸೆಂಬರ್ 95ರ ಅಂತ್ಯದ ವೇಳೆಗೆ ಪೂರ್ಣಗೊಳಿಸಲು ಗುರಿ ಹೊಂದಿದೆ. ಈ ಸಬ್ ಸ್ಟೇಷನ್ ಕಾರ್ಯಾರಂಭ ಮಾಡಿದ ಮೇಲೆ ಹಿರೇಕೆರೂರು ತಾಲ್ಲೂಕಿನಲ್ಲಿ ವಿದ್ಯುತ್ ಸರಬರಾಜಿನಲ್ಲಿ ಸ್ವಲ್ಪ ಮಟ್ಟಿಗೆ ಸುಧಾರಣೆ ಉಂಟಾಗುತ್ತದೆ. ಅಲ್ಲದೇ ಈ ತಾಲ್ಲೂಕಿನ ಚಿಕ್ಕೆರೂರು ಗ್ರಾಮದಲ್ಲಿಯೂ ಸಹ ಒಂದು 33:11 ಕೆ.ವಿ.ವಿದ್ಯುತ್ ಸಬ್ ಸ್ಟೇಷನ್‌ನ್ನು ಸುಮಾರು 80 ಲಕ್ಷ ರೂ. ವೆಚ್ಚದಲ್ಲಿ ನಿರ್ಮಾಣ ಮಾಡಲು ಉದ್ದೇಶಿಸಿದೆ.

ಈ ತಾಲ್ಲೂಕಿನ ಹಳ್ಳೂರು ಗ್ರಾಮದಲ್ಲಿ ಒಂದು 66:11 ಕೆ.ವಿ.ವಿದ್ಯುತ್ ಉಪಕೇಂದ್ರವನ್ನು ನಿರ್ಮಾಣ ಮಾಡುವ ಬಗ್ಗೆ ಪ್ರಸ್ತಾವನೆಯನ್ನು ಪರಿಶೀಲಿಸಲಾಗುತ್ತಿದೆ. ಪರಿಶೀಲನೆಯ ನಂತರ, ತಾಂತ್ರಿಕ ಸಮಿತಿಯ ಮುಂದೆ ಮಂಡಿಸಿ, ತಾಂತ್ರಿಕ ಸಮಿತಿಯ ತೀರ್ಮಾನದಂತೆ ಆದಷ್ಟು ಬೇಗ ಕ್ರಮ ತೆಗೆದುಕೊಳ್ಳಲಾಗುವುದು.